<u>ದಿನಾಂಕ **06.03.2026** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>

ಈ ದಿನ ನಾನು ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ನ್ಯಾಯಾಲಯದಲ್ಲಿ ಹಾಜರಪಡಿಸಿದ್ದು, ಅದರಲ್ಲಿ ಬರೆದಿರುವ ಸಂಗತಿಗಳನ್ನು ನಾನೇ ಹೇಳಿ ಬರೆಯಿಸಿದ್ದು, ಅದು ನಿಜವಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

<u>ಮುಂದುವರೆದ ಮುಖ್ಯ ವಿಚಾರಣೆಃ- ವಾದಿ ಪರ ಶ್ರೀ.ಪಿ ಎಸ್ ಎಸ್ ವಕೀಲರಿಂದಃ-</u>

1. ದಾವಾ ಸ್ವತ್ತು ಸರ್ವೆ ನಂ.147 ರ ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

2. ದಾವಾ ಸ್ವತ್ತು ಸರ್ವೆ ನಂ.148/2 ರ ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

3. ದಾವಾ ಸ್ವತ್ತು ಸರ್ವೆ ನಂ.149/2 ರ ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

4. ದಾವಾ ಸ್ವತ್ತು ಸರ್ವೆ ನಂ.6/1 ರ ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

5. ದಾವಾ ಸ್ವತ್ತು ಸರ್ವೆ ನಂ.6/3 ರ ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

6. ಒಂದು ಗಣಕೀಕೃತ ಮುಟೇಶನ್ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

7. ಡಿಜಿಟಲ್ ರುಜು ಇರುವ ದಿನಾಂಕ 03.01.2024 ರ ಭಕ್ಷಿಶ್ ಪತ್ರದ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

8. ಓ.ಎಸ್.ನಂ.194/2023 ರ ವಾದ ಪತ್ರದ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ **3**ನೇ ಪ್ರತಿವಾದಿಯ ಪರ ಶ್ರೀ. ವ್ಹಿ ಎಸ್ ಬಿ ವಕೀಲರಿಂದಃ-</u>

(3ನೇ ಪ್ರತಿವಾದಿ ಪರ ವಕೀಲರು ಸಾಕ್ಷಿಯ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರುತ್ತಾರೆ. ಆದೇಶ ಪುಟಗಳನ್ನು ಪರಿಶೀಲಿಸಿ ನೋಡಲಾಗಿ, ಸದರಿ ಪ್ರತಿವಾದಿಯು ತಮ್ಮ ಪ್ರತಿವಾದ ಪತ್ರ ಸಲ್ಲಿಸದೇ ಇರುವುದು ಕಂಡು ಬರುತ್ತದೆ. ಆದ್ದರಿಂದ ಸಾಕ್ಷಿಯ ಪಾಟೀ ಸವಾಲಿಗಾಗಿ

ಕಾಲಾವಕಾಶ ನೀಡಲು ಯಾವುದೇ ಸಕಾರಣಗಳು ಕಂಡು ಬರದೇ ಇರುವುದರಿಂದ, ಸದರಿ ವಕೀಲರ ಪ್ರಾರ್ಥನೆಯನ್ನು ತಿರಸ್ಕರಿಸಿ, 3ನೇ ಪ್ರತಿವಾದಿ ಪರ ಸಾಕ್ಷಿಯ ಪಾಟೀಸವಾಲನ್ನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.)

<u>ಮರುವಿಚಾರಣೆ ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಅದೆ.

RAJASHEKHAR Digitally signed by RAJASHEKHAR Date: 2026.03.06 18:01:13 +0530

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಮ್.ಎಫ್.ಸಿ. ಜಮಖಂಡಿ.